# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ:ಪವಿ:ಪಶು:2023-24 : 815 ದಿನಾಂಕ:01.12.2023

## : ಅಧಿಸೂಚನೆ :

ವಿಷಯ : ಸ್ನಾತಕ ಶಿಕ್ಷಣ ಪದವಿಯ (ಬಿ.ಇಡಿ.) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024 ರ ಜನವರಿ ಮಾಹೆಯಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (B.Ed.) ಪದವಿಯ ಪರೀಕ್ಷೆಗಳಿಗೆ CBCS ಪಠ್ಯಕ್ರಮದಂತೆ 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ಪೂರಕ ವಿದ್ಯಾರ್ಥಿಗಳಿಂದ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ನ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ಅರ್ಹ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ ಸಂಬಂಧಿಸಿದ ವಿದ್ಯಾರ್ಥಿಗಳು ಶೈಕ್ಷಣಿಕ ವಿಭಾಗದಿಂದ ಪ್ರವೇಶಾನುಮೋದನೆಯಾದ ವಿಷಯಗಳಿಗೆ / ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ / ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.

ಶುಲ್ಕ ಪಾವತಿಸಲು ವಿವರವಾದ ದಿನಾಂಕಗಳು ಈ ಕೆಳಗಿನಂತಿವೆ.

| ಕ್ರಮ ಸಂಖ್ಯೆ | ಶುಲ್ಕದ ವಿವರ | ಕೊನೆಯ ದಿನಾಂಕ |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 14.12.2023 |
| 2. | ವಿದ್ಯಾರ್ಥಿಗಳಿಗೆ ರೂ. 100/- ಗಳ ದಂಡ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 16.12.2023 |
| 3. | ವಿದ್ಯಾರ್ಥಿಗಳಿಗೆ ರೂ. 500/- ಗಳ ವಿಶೇಷ ದಂಡ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 18.12.2023 |
| 4. | ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 20.12.2023 |
| 5. | ಕಾಲೇಜಿನವರು ವಿಶ್ವವಿದ್ಯಾನಿಲಯದ ಖಾತೆಗೆ ಪಾವತಿಸಲು ಕೊನೆಯ ದಿನಾಂಕ | 22.12.2023 |

### ಶುಲ್ಕಗಳ ವಿವರ

| ಕ್ರ. ಸಂ. | ಸೆಮಿಸ್ಟರ್ | ಕೋರ್ಸ್ | ಪರೀಕ್ಷಾ ಶುಲ್ಕ |
|---|---|---|---|
| 1. | ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ (ಪೂರಕ) | ಬಿ.ಇಡಿ. | ಒಂದು ವಿಷಯಕ್ಕೆ ರೂ. 100-00/- |

(...2 ನೇ ಪುಟಕ್ಕೆ)

ಎಲ್ಲಾ ವಿದ್ಯಾರ್ಥಿಗಳು ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

(ಅನ್ವಯಿಸುವ ಶುಲ್ಕವನ್ನು ಮಾತ್ರ ಪಾವತಿಸತಕ್ಕದ್ದು)

| ಕ್ರ.ಸಂ. | ಇತರೆ ಶುಲ್ಕಗಳ ವಿವರ | ಮೊತ್ತ (ರೂ. ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ ( ಪ್ರತಿ ಸೆಮಿಸ್ಟರ್‌ಗೆ) | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 25-00 |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Processing fee) ( ಪ್ರತಿ ಸೆಮಿಸ್ಟರ್‌ಗೆ) | 35-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ ( ಒಂದು ವಿಷಯಕ್ಕೆ) | 150-00 |
| 6. | ಮೌಖಿಕ ಸಂದರ್ಶನ (Viva-Voce ) ( ಒಂದು ವಿಷಯಕ್ಕೆ) | 150-00 |
| 7. | ಪ್ರಾಜೆಕ್ಟ್ ವ್ಯಾಲ್ಯೂವೇಷನ್ ( Project Evaluation ) ( ಒಂದು ವಿಷಯಕ್ಕೆ) | 100-00 |

* ಅರ್ಜಿ ಪರಿಶೀಲನಾ ಶುಲ್ಕ ರೂ. 10-00 ಗಳಲ್ಲಿ ರೂ. 06-00 ಗಳನ್ನು ಪರೀಕ್ಷಾ ಕೇಂದ್ರದಲ್ಲಿ ಉಳಿಸಿಕೊಂಡು ಉಳಿದ ರೂ. 04-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

* ಆನ್‌ಲೈನ್ ಅರ್ಜಿ ಶುಲ್ಕ ರೂ. 25-00 ಗಳಲ್ಲಿ ರೂ. 05-00 ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ. 20-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

ಎಲ್ಲಾ ವರ್ಗಗಳ ಪೂರಕ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ (ಸೆಮಿಸ್ಟರ್‌ವಾರು) ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು.

**ವಿಶ್ವವಿದ್ಯಾನಿಲಯದ ನಿಯಮಾನುಸಾರ ಪರೀಕ್ಷಾ ಶುಲ್ಕ ಪಾವತಿಸಲು ಅರ್ಹತೆ ಇಲ್ಲದಿದ್ದ ಪಕ್ಷದಲ್ಲಿ ಅಂತಹ ವಿದ್ಯಾರ್ಥಿಗಳಿಂದ ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಸ್ವೀಕರಿಸಲು ಹಾಗೂ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.**

**ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.**

ವಿಶ್ವವಿದ್ಯಾನಿಲಯದಿಂದ ಅನುಮೋದನೆ ಪಡೆದ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ **RTGS/NEFT ಮೂಲಕ ಎಸ್.ಬಿ.ಐ. ಖಾತೆ ನಂ. : 36954908103 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ:22.12.2023 ರೊಳಗೆ ಪಾವತಿಸುವುದು. ಪಾವತಿಸಿದ ಮೂಲ ಪ್ರತಿಯನ್ನು ಪರೀಕ್ಷಾಂಗ ವಿಭಾಗಕ್ಕೆ ಹಾಗೂ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಹಣಕಾಸು ವಿಭಾಗಕ್ಕೆ ಸಲ್ಲಿಸುವುದು.**

ಪ್ರಾಯೋಗಿಕ (Practical) ಪರೀಕ್ಷೆಗಳನ್ನು ಸೈದ್ಧಾಂತಿಕ (Theory) ಪರೀಕ್ಷೆಗಳಿಗಿಂತ ಮೊದಲು ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಪರೀಕ್ಷಾ ಅಧೀಕ್ಷಕರು ಸಿದ್ಧಪಡಿಸಿ ಸಂಬಂಧಿಸಿದ ಪರೀಕ್ಷಾ ಮಂಡಳಿ ಅಧ್ಯಕ್ಷರಿಂದ ಅನುಮೋದನೆ ಪಡೆದು ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಿಸುವುದು ಮತ್ತು ಅದರ ಒಂದು ಪ್ರತಿಯನ್ನು ಮಾನ್ಯ ಕುಲಸಚಿವರು (ಪರೀಕ್ಷಾಂಗ) ಇವರಿಗೆ ಸಲ್ಲಿಸುವುದು.

ಸೈದ್ಧಾಂತಿಕ (ಪಠ್ಯವಿಷಯ) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ಪ್ರಕಟಿಸಲಾಗುವುದು.

MAAC ಸಮಿತಿಯು ಪರಿಶೀಲಿಸಿ ನೀಡಿದ ಆಂತರಿಕ ಅಂಕಗಳನ್ನು ವಿಶ್ವವಿದ್ಯಾನಿಲಯಕ್ಕೆ ಆನ್‌ಲೈನ್‌ನಲ್ಲಿ ನಮೂದಿಸಿ, ನಂತರ ವಿಶ್ವವಿದ್ಯಾನಿಲಯಕ್ಕೆ ಹಾರ್ಡ್ ಕಾಪಿಯನ್ನು ಸಲ್ಲಿಸುವ ಮೊದಲು ಪ್ರಾಂಶುಪಾಲರು ಮತ್ತು MAAC

(...3 ನೇ ಪುಟಕ್ಕೆ)

ಸಮಿತಿಯ ಮುಖ್ಯಸ್ಥರು ಖುದ್ದಾಗಿ ಪರಿಶೀಲಿಸಿ, ದೃಢೀಕರಣದೊಂದಿಗೆ **ಮಾನ್ಯ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರಿಗೆ ಸೈದ್ಧಾಂತಕ ಪರೀಕ್ಷೆಗಳು ಪ್ರಾರಂಭವಾಗುವ ಮೊದಲು ಸಲ್ಲಿಸತಕ್ಕದ್ದು. **ಒಂದು ಬಾರಿ ಸಲ್ಲಿಸಿದ ನಂತರ ಯಾವುದೇ ಕಾರಣಕ್ಕೂ ತಿದ್ದುಪಡಿ ಮಾಡುವುದಿಲ್ಲ ಎಂಬ ಅಂಶವನ್ನು ಗಮನಿಸುವುದು.** ವಿಳಂಬವಾದಲ್ಲಿ ದಿನವೊಂದಕ್ಕೆ **ರೂ. 1,000/-** ಗಳಂತೆ ಗರಿಷ್ಠ **ರೂ. 10,000-00 (ಹತ್ತು ದಿನಗಳು)** ಗಳ ದಂಡಶುಲ್ಕದೊಂದಿಗೆ ಪ್ರತಿಯನ್ನು ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸುವುದು. ಸೆಮಿಸ್ಟರ್‌ವಾರು ಆಂತರಿಕ ಅಂಕಗಳನ್ನು ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಅಂಗೀಕರಿಸಲಾಗುವುದಿಲ್ಲ ಎಂಬುದನ್ನು ಗಮನಿಸಿ ಆಗುವ ತಪ್ಪುಗಳಿಗೆ ಪ್ರಾಂಶುಪಾಲರುಗಳೇ ನೇರ ಜವಾಬ್ದಾರರಾಗಿರುತ್ತಾರೆ.

ಎಲ್ಲಾ ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.

5/12/23

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಶಿಕ್ಷಣ (ಬಿ.ಇಡಿ.) ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು :**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಈ ಅಧಿಸೂಚನೆಯನ್ನು ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಬಿ.ಇಡಿ. ಕಾಲೇಜುಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.)**
7. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.